**ಕರ್ನಾಟಕ ವಿಧಾನ ಪರಿಷತ್ತು**
**ನೂರ ಐವತ್ತೈದನೆಯ ಅಧಿವೇಶನ**

# ಕರ್ನಾಟಕ ಮಿತಿಮೀರಿದ ಬಡ್ಡಿ ವಿಧಿಸುವಿಕೆಯ ನಿಷೇಧ (ತಿದ್ದುಪಡಿ) ವಿಧೇಯಕ, 2025

**(2025ರ ವಿಧಾನಸಭೆಯ ವಿಧೇಯಕ ಸಂಖ್ಯೆ–03)**

**(ಕರ್ನಾಟಕ ವಿಧಾನಸಭೆಯಿಂದ ಅಂಗೀಕಾರವಾದ ರೂಪದಲ್ಲಿ)**

ಕರ್ನಾಟಕ ಮಿತಿಮೀರಿದ ಬಡ್ಡಿ ವಿಧಿಸುವಿಕೆಯ ನಿಷೇಧ ಅಧಿನಿಯಮ, 2004ನ್ನು ತಿದ್ದುಪಡಿ ಮಾಡಲು ಒಂದು ವಿಧೇಯಕ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ಮಿತಿಮೀರಿದ ಬಡ್ಡಿ ವಿಧಿಸುವಿಕೆಯ ನಿಷೇಧ ಅಧಿನಿಯಮ, 2004 (2004ರ ಕರ್ನಾಟಕ ಅಧಿನಿಯಮ 14)ನ್ನು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ ;

ಇದು ಭಾರತ ಗಣರಾಜ್ಯದ ಎಪ್ಪತ್ತಾರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ಮಿತಿಮೀರಿದ ಬಡ್ಡಿ ವಿಧಿಸುವಿಕೆಯ ನಿಷೇಧ (ತಿದ್ದುಪಡಿ) ಅಧಿನಿಯಮ, 2025 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೆ ಜಾರಿಗೆ ಬರತಕ್ಕದ್ದು.

**2. ಪ್ರಕರಣ 3ರ ಪ್ರತಿಯೋಜನೆ.-** ಕರ್ನಾಟಕ ಮಿತಿಮೀರಿದ ಬಡ್ಡಿ ವಿಧಿಸುವಿಕೆಯ ನಿಷೇಧ ಅಧಿನಿಯಮ, 2004 (2004ರ ಕರ್ನಾಟಕ ಅಧಿನಿಯಮ 14)ರ (ಇಲ್ಲಿ ಇನ್ನುಮುಂದೆ ಮೂಲ ಅಧಿನಿಯಮವೆಂದು ಕರೆಯಲಾಗಿದೆ) 3ನೇ ಪ್ರಕರಣದ ಬದಲಿಗೆ ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ:-

"**3. ಮಿತಿಮೀರಿದ ಬಡ್ಡಿ ವಿಧಿಸುವಿಕೆ ಮತ್ತು ಬಲವಂತದ ಕ್ರಮದ ಬಳಕೆಯ ನಿಷೇಧ.-** (1) ಯಾರೇ ವ್ಯಕ್ತಿಯೂ ಆತನು ನೀಡಿದ ಯಾವುದೇ ಸಾಲದ ಮೇಲೆ ಮಿತಿಮೀರಿದ ಬಡ್ಡಿಯನ್ನು ವಿಧಿಸತಕ್ಕದ್ದಲ್ಲ.

(2) ಲೇವಾದೇವಿದಾರನು ಸಾಲಗಾರರಿಂದ ಹಣ ವಸೂಲಾತಿಗಾಗಿ ಆತನಾಗಲಿ ಅಥವಾ ಆತನ ಏಜೆಂಟರ ಮೂಲಕವಾಗಲಿ ಅಥವಾ ಆತನ ಕುಟುಂಬ ಸದಸ್ಯರ ಮೂಲಕವಾಗಲಿ ಯಾವುದೇ ಇತರ ಬಲವಂತದ ಕ್ರಮವನ್ನು ಬಳಸತಕ್ಕದ್ದಲ್ಲ ಮತ್ತು ಬಲವಂತ ವಸೂಲಾತಿಯ ಯಾವುದೇ ಸ್ವರೂಪಕ್ಕಾಗಿ ಈ ಅಧಿನಿಯಮದ ಉಪಬಂಧಗಳಡಿ ದಂಡನೆಗೆ ಹೊಣೆಯಾಗತಕ್ಕದ್ದು ಹಾಗೂ ಈ

ಅಧಿನಿಯಮದ ಮೇರೆಗೆ ಉಪಬಂಧಿಸಲಾದಂತೆ ಅಂಥ ಲೇವಾದೇವಿದಾರನ ನೋಂದಣಿಯನ್ನು ಅಮಾನತ್ತುಪಡಿಸಲು ಅಥವಾ ರದ್ದುಪಡಿಸಲು ನೋಂದಣಿ ಪ್ರಾಧಿಕಾರಿಯು ಅಧಿಕಾರವುಳ್ಳವನಾಗಿರತಕ್ಕದ್ದು.

**ವಿವರಣೆ:** ಈ ಪ್ರಕರಣದ ಉದ್ದೇಶಗಳಿಗಾಗಿ, ಲೇವಾದೇವಿದಾರನ ಮೂಲಕ ಸಾಲಗಾರರ ವಿರುದ್ಧದ "ಬಲವಂತದ ಕ್ರಮ"ವು ಈ ಮುಂದಿನವುಗಳನ್ನು ಒಳಗೊಳ್ಳುವುದು, ಎಂದರೆ:-

(i) ಸಾಲಗಾರರನ್ನು ಅಥವಾ ಆತನ/ಆಕೆಯ ಕುಟುಂಬ ಸದಸ್ಯರಿಗೆ ಒತ್ತಡವನ್ನು ಹಾಕುವುದು ಅಥವಾ ತಡೆಯೊಡ್ಡುವುದು ಅಥವಾ ಹಿಂಸೆಯನ್ನು ಬಳಸುವುದು ಅಥವಾ ಅವಮಾನಿಸುವುದು ಅಥವಾ ಬೆದರಿಸುವುದು, ಅಥವಾ

(ii) ಸಾಲಗಾರನನ್ನು, ಆತನ/ಆಕೆಯ ಕುಟುಂಬ ಸದಸ್ಯರನ್ನು ಸ್ಥಳದಿಂದ ಸ್ಥಳಕ್ಕೆ ನಿರಂತರವಾಗಿ ಹಿಂಬಾಲಿಸುವುದು ಅಥವಾ ಆತನ/ಆಕೆಯ ಒಡೆತನದ ಅಥವಾ ಬಳಕೆಯಲ್ಲಿನ ಯಾವುದೇ ಸ್ವತ್ತಿಗೆ ಮಧ್ಯಪ್ರವೇಶಿಸುವುದು ಅಥವಾ ಆತನ/ಆಕೆಯಿಂದ ಕಿತ್ತುಕೊಳ್ಳುವುದು ಅಥವಾ ಯಾವುದೇ ಅಂಥ ಸ್ವತ್ತಿನ ಬಳಕೆಗೆ ಆತನಿಗೆ/ಆಕೆಗೆ ಅಡ್ಡಿಪಡಿಸುವುದು, ಅಥವಾ

(iii) ಸಾಲಗಾರನು ವಾಸವಾಗಿರುವ ಅಥವಾ ಕೆಲಸ ಮಾಡುತ್ತಿರುವ ಅಥವಾ ವ್ಯವಹಾರ ನಡೆಸುತ್ತಿರುವ ಮನೆ ಅಥವಾ ಇತರ ಸ್ಥಳಕ್ಕೆ ಬಲವಂತದ ಕ್ರಮವನ್ನು ಕೈಗೊಳ್ಳುವ ಉದ್ದೇಶದಿಂದ ಆಗಾಗ ಭೇಟಿ ನೀಡುವುದು ಅಥವಾ ಭೇಟಿಯಾಗುವಂತೆ ಮಾಡುವುದು, ಅಥವಾ

(iv) ಸಾಲಗಾರನಿಗೆ ಹಣ ಪಾವತಿಗಾಗಿ ಬಲವಂತದ ಮತ್ತು ಅನುಚಿತ ಪ್ರಭಾವವನ್ನು ಬಳಸಿ ಮಾತುಕತೆಗೆ/ಒತ್ತಾಯಿಸುವುದಕ್ಕೆ ಖಾಸಗಿ ಅಥವಾ ಹೊರಗುತ್ತಿಗೆ ಅಥವಾ ಬಾಹ್ಯ ಏಜೆನ್ಸಿಗಳ, ಕ್ರಿಮಿನಲ್ ಹಿನ್ನಲೆಯುಳ್ಳವರ ಸೇವೆಯನ್ನು ಬಳಸುವುದು, ಅಥವಾ

(v) ಸರ್ಕಾರದ ಯಾವುದೇ ಕಾರ್ಯಕ್ರಮದಡಿಯಲ್ಲಿ ಸಾಲಗಾರನಿಗೆ ಪ್ರಯೋಜನದ ಹಕ್ಕುಗಳುಳ್ಳ ಯಾವುದೇ ದಸ್ತಾವೇಜನ್ನು ಸಾಲಗಾರನಿಂದ ಬಲವಂತವಾಗಿ ಪಡೆಯುವುದು."

**3. ಪ್ರಕರಣ 4ರ ತಿದ್ದುಪಡಿ.-** ಮೂಲ ಅಧಿನಿಯಮದ 4ನೇ ಪ್ರಕರಣದಲ್ಲಿ,-

(ಎ) "ಮೂರು ವರ್ಷಗಳವರೆಗೆ" ಎಂಬ ಪದಗಳ ಬದಲಿಗೆ "ಹತ್ತು ವರ್ಷಗಳವರೆಗೆ" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು; ಮತ್ತು

(ಬಿ) "ಮೂವತ್ತು ಸಾವಿರ ರೂಪಾಯಿಗಳವರೆಗೆ" ಎಂಬ ಪದಗಳ ಬದಲಿಗೆ "ಐದು ಲಕ್ಷ ರೂಪಾಯಿಗಳವರೆಗೆ" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು.

**4. ಹೊಸ ಪ್ರಕರಣ 4ಎ ಮತ್ತು 4ಬಿಗಳ ಸೇರ್ಪಡೆ**.- ಮೂಲ ಅಧಿನಿಯಮದ 4ನೇ ಪ್ರಕರಣದ ತರುವಾಯ, ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:-

**"4ಎ. ನೋಂದಣಿಯನ್ನು ರದ್ದುಗೊಳಿಸುವ ಅಥವಾ ಅಮಾನತ್ತುಗೊಳಿಸುವ ಅಧಿಕಾರ.-** (1) ನೋಂದಣಿ ಪ್ರಾಧಿಕಾರಿಯು ಯಾವುದೇ ಸಮಯದಲ್ಲಿ ಸ್ವತಃ ಅಥವಾ ಸಾಲಗಾರನಿಂದ ದೂರು

ಸ್ವೀಕರಿಸಿದ ಮೇಲೆ ಅಂಥ ರದ್ದತಿಗಾಗಿ ಲಿಖಿತದಲ್ಲಿ ಸಾಕಷ್ಟು ಕಾರಣಗಳನ್ನು ನೀಡಿದ ತರುವಾಯ ಮತ್ತು ಅದನ್ನು ಆಲಿಸಿದ ತರುವಾಯ ಲೇವಾದೇವಿದಾರನ ನೋಂದಣಿಯನ್ನು ರದ್ದುಗೊಳಿಸಬಹುದು ಅಥವಾ ರದ್ದುಪಡಿಸಲು ಶಿಫಾರಸ್ಸು ಮಾಡಬಹುದು ಹಾಗೂ ಲೇವಾದೇವಿದಾರನನ್ನು ಯಾವ ಅಂಶಗಳ ಮೇಲೆ ಮೇಲ್ನೋಟಕ್ಕೆ ರದ್ದುಗೊಳಿಸುವ ತೀರ್ಮಾನ ಕೈಗೊಳ್ಳಲಾಗಿದೆಯೆಂದು ತಿಳಿಸುವ ನೋಟೀಸು ನೀಡಿದ ಹೊರತು ಮತ್ತು ಲೇವಾದೇವಿದಾರನಿಗೆ ಅಂಥ ನೋಟೀಸಿನ ವಿರುದ್ಧ ಅಹವಾಲನ್ನು ಹೇಳಿಕೊಳ್ಳುವ ಸೂಕ್ತ ಅವಕಾಶವನ್ನು ನೀಡಿದ ಹೊರತು ನೋಂದಣಿ ರದ್ದತಿಯ ಆದೇಶವನ್ನು ಹೊರಡಿಸತಕ್ಕದ್ದಲ್ಲ.

**ವಿವರಣೆ:** ಉಪಪ್ರಕರಣ (1)ರ ಉದ್ದೇಶಗಳಿಗಾಗಿ ಲೇವಾದೇವಿದಾರನು, ಈ ಅಧಿನಿಯಮದ ಯಾವುದೇ ಉಪಬಂಧಗಳ ಉಲ್ಲಂಘನೆಯ ಅಪರಾಧಕ್ಕಾಗಿನ ಅಪರಾಧ ನಿರ್ಣಯವು ಅದರ ನೋಂದಣಿಯನ್ನು ಅಮಾನತ್ತುಗೊಳಿಸಲು ಅಥವಾ ರದ್ದುಗೊಳಿಸಲು ಸಾಕಷ್ಟು ಕಾರಣವುಳ್ಳದ್ದಾಗಿರತಕ್ಕದ್ದು.

(2) ನೋಂದಣಿ ಪ್ರಾಧಿಕಾರಿಯು (1)ನೇ ಉಪಪ್ರಕರಣದಡಿ ವಿಚಾರಣೆಯನ್ನು ಬಾಕಿಯಿರಿಸಿ, ದಾಖಲಿಸಬೇಕಾದ ಸಾಕಷ್ಟು ಕಾರಣಗಳಿಗಾಗಿ ಲೇವಾದೇವಿದಾರನ ನೋಂದಣಿಯನ್ನು ಅಮಾನತ್ತುಪಡಿಸಬಹುದು.

**4ಬಿ. ಸಾಲ ನೀಡಿಕೆ ಮಾನದಂಡಗಳು.-** ಸರ್ಕಾರವು ಅಧಿಸೂಚನೆಯ ಮೂಲಕ ಸಾಲನೀಡಿಕೆ ಮಾನದಂಡಗಳು, ಸಂಗ್ರಹಣೆ ಮತ್ತು ವಸೂಲಾತಿ ಪದ್ಧತಿಗಳನ್ನು ನಿರ್ದಿಷ್ಟಪಡಿಸಬಹುದು.”

## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ
**(ವಿಧೇಯಕವನ್ನು ಮಂಡಿಸುವಾಗ ಲಗತ್ತಿಸಿದಂತೆ)**

ಲೈಸೆನ್ಸ್‌ಯುಕ್ತ ಲೇವಾದೇವಿದಾರ ಮತ್ತು ಲೈಸೆನ್ಸ್‌ರಹಿತ ಲೇವಾದೇವಿದಾರರು ನೀಡುವ ದುಬಾರಿ ಬಡ್ಡಿ ದರಗಳ ಅನುಚಿತ ತೊಂದರೆ ಮತ್ತು ಬಲವಂತದ ವಸೂಲಾತಿ ವಿಧಾನಗಳಿಂದ ಆರ್ಥಿಕವಾಗಿ ದುರ್ಬಲ ಗುಂಪುಗಳು ಮತ್ತು ವ್ಯಕ್ತಿಗಳನ್ನು ರಕ್ಷಿಸುವುದಕ್ಕಾಗಿ, ಕರ್ನಾಟಕ ಮಿತಿಮೀರಿದ ಬಡ್ಡಿ ವಿಧಿಸುವಿಕೆ ನಿಷೇಧ ಅಧಿನಿಯಮ, 2004 (2004ರ ಕರ್ನಾಟಕ ಅಧಿನಿಯಮ 14)ನ್ನು ತಿದ್ದುಪಡಿ ಮಾಡುವುದು ಅವಶ್ಯಕವೆಂದು ಪರಿಗಣಿಸಿದೆ.

ಆದ್ದರಿಂದ ಈ ವಿಧೇಯಕ.

## **ಆರ್ಥಿಕ ಜ್ಞಾಪನ ಪತ್ರ**

ಪ್ರಸ್ತಾವಿತ ಶಾಸನಾತ್ಮಕ ಕ್ರಮದಿಂದಾಗಿ ಯಾವುದೇ ಹೆಚ್ಚಿನ ವೆಚ್ಚವು ಉಂಟಾಗುವುದಿಲ್ಲ.

**ಕ್ಯಾತ್ಸಂದ್ರ ಎನ್. ರಾಜಣ್ಣ**
ಕೃಷಿ ಮಾರುಕಟ್ಟೆಯನ್ನು ಹೊರತುಪಡಿಸಿ
ಸಹಕಾರ ಮಂತ್ರಿ

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

## ಅನುಬಂಧ

## ಕರ್ನಾಟಕ ಮಿತಿಮೀರಿದ ಬಡ್ಡಿ ವಿಧಿಸುವಿಕೆ ನಿಷೇಧ ಅಧಿನಿಯಮ, 2004ರ (2004ರ ಕರ್ನಾಟಕ ಅಧಿನಿಯಮ 14) ಉದ್ಧೃತ ಭಾಗ

**XXX XXX XXX**

**3. ಮಿತಿಮೀರಿದ ಬಡ್ಡಿ ವಿಧಿಸುವಿಕೆಯ ನಿಷೇಧ.-** ಯಾವೊಬ್ಬ ವ್ಯಕ್ತಿಯೂ ತಾನು ನೀಡಿದ ಯಾವುದೇ ಸಾಲದ ಮೇಲೆ ಮಿತಿಮೀರಿದ ಬಡ್ಡಿಯನ್ನು ವಿಧಿಸತಕ್ಕದ್ದಲ್ಲ.

**XXX XXX XXX**

**4. ದಂಡ.-** ಕರ್ನಾಟಕ ಲೇವಾದೇವಿಗಾರರ ಅಧಿನಿಯಮ, 1961ರಲ್ಲಿ ಏನೇ ಒಳಗೊಂಡಿದ್ದರೂ, 3ನೇ ಪ್ರಕರಣದ ಉಪಬಂಧವನ್ನು ಉಲ್ಲಂಘಿಸುವ ಅಥವಾ ಯಾವುದೇ ಸಾಲದ ವಸೂಲಿಗಾಗಿ ಯಾವೊಬ್ಬ ಸಾಲಗಾರನನ್ನು ಪೀಡಿಸುವ ಅಥವಾ ಪೀಡಿಸುವುದಕ್ಕಾಗಿ ದುಷ್ಪ್ರೇರಿಸುವ ಯಾವೊಬ್ಬ ವ್ಯಕ್ತಿಯು, ಮೂರು ವರ್ಷಗಳವರೆಗೆ ವಿಸ್ತರಿಸಬಹುದಾದ ಅವಧಿಯ ಕಾರಾವಾಸದಿಂದ ಮತ್ತು ಮೂವತ್ತು ಸಾವಿರ ರೂಪಾಯಿಗಳವರೆಗೆ ವಿಸ್ತರಿಸಬಹುದಾದ ಜುಲ್ಮಾನೆಯಿಂದ ಸಹ ದಂಡಿತನಾಗತಕ್ಕದ್ದು.

**XXX XXX XXX**

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ, ಬೆಂಗಳೂರು, ಕಾಸೂ , ಪ್ರತಿಗಳು 300, 10ನೇ ಮಾರ್ಚ್ 2025

KARNATAKA LEGISLATIVE COUNCIL
ONE HUNDRED AND FIFTY FIFTH SESSION

# THE KARNATAKA PROHIBITION OF CHARGING EXORBITANT INTEREST (AMENDMENT) BILL, 2025

**(LA Bill No. 03 of 2025)**
**(As passed by the Karnataka Legislative Assembly)**

A Bill to amend the Karnataka Prohibition of Charging Exorbitant Interest Act, 2004.

Whereas, it is expedient to amend the Karnataka Prohibition of Charging Exorbitant Interest Act, 2004 (Karnataka Act 14 of 2004) for the purposes hereinafter appearing;

Be it enacted by the Karnataka State Legislature in the seventy sixth year of the Republic of India as follows:-

**1. Short title, and commencement.-** (1) This Act may be called the Karnataka Prohibition of Charging Exorbitant Interest (Amendment) Act, 2025.

(2) It shall come into force at once.

**2. Substitution of section 3.-** For section 3 of the Karnataka Prohibition of Charging Exorbitant Interest Act, 2004 (Karnataka Act 14 of 2004) (hereinafter referred to as the Principal Act) the following shall be substituted, namely,-

**“3. Prohibition of charging exorbitant interest and using coercive action.-** (1) No person shall charge exorbitant interest on any loan advanced by him.

(2) Money Lender shall not use any coercive action either by himself or by his agents or by his family members for recovery of money from the debtor and any form of coercive recovery shall be liable for punishment under the provisions of this Act and empower the Registering Authority to suspend or cancel the Registration of such Money Lender as provided under the provisions of this Act.

**Explanation:** For the purposes of this section, "coercive Action" by a Money Lender against the debtors include the following, namely:-

(i) exerting pressure or obstructing or using violence to or insulting or intimidating the debtor or his/her family members, or

(ii) persistently following the debtor, his/her family member from place to place or interfering with any property owned or used by him/her or depriving him/her of, or hindering him/her in the use of any such property, or

(iii) frequenting the house or other place where the debtor resides or works, or carries on business, or happens to be, with an intension of taking coercive action, or

(iv) using the service of private or outsource or external agencies, criminal background to negotiate/urging the debtor to make payment using coercive and undue influence, or

(v) Seeking to take forcibly any document from the debtor which entitles the debtor to a benefit under any Government programme.**”**

**3. Amendment of section 4.-** In section 4 of the Principal Act,-

(a) for the words “three years”, the words “ten years”, shall be substituted; and

(b) for the words “thirty thousand rupees” the words “five lakh rupees” shall be substituted.

**4. Insertion of new section 4A and 4B.-** After section 4 of the Principal Act, the following shall be inserted namely,-

**“4A. Power to cancel or suspend Registration.-** (1) The Registering Authority may, at any time, either suo-motu or upon receipt of complaint by a debtor cancel or recommend to cancel the registration of a Money Lender after hearing and after assigning sufficient reasons in writing for such cancellation and no order of cancellation of the registration shall be passed without issuing notice to the Money Lender intimating the facts upon which the prima-facie decision to cancel the registration has been taken and Money Lender shall be afforded a reasonable opportunity of being heard against such notice.

**Explanation:** For the purposes of sub-section (1), conviction of a Money Lender for an offence of violation of any of the provisions of this Act shall be sufficient cause for cancellation or recommend to cancellation of his registration.

(2) Pending enquiry under sub-section (1), the Registering Authority may, for sufficient reasons to be recorded, suspend the registration, of a Money Lender.

**4B. Lending Norms.-** The Government may, by notification, specify the lending norms, collection and recovery practices.**”**

## STATEMENT OF OBJECTS AND REASONS

**(As appended to at the time of introduction)**

It is considered necessary to amend the Karnataka Prohibition of Charging Exorbitant Interest Act, 2004 (Karnataka Act 14 of 2004) to protect economically vulnerable groups and individuals from the undue hardship usurious interests rates and coercive means of recovery by licensed pawn brokers and unlicensed pawn brokers.

Hence, the Bill.

**FINANCIAL MEMORANDUM**

There is no extra expenditure involved in the proposed measure.

**KYATHASANDRA N.RAJANNA**
Minister for Co-operation
excluding Agriculture Marketing

**K.R. MAHALAKSHMI**
Secretary
Karnataka Legislative Council

## ANNEXURE

## EXTRACT FROM THE KARNATAKA PROHIBITION OF CHARGING EXORBITANT INTEREST ACT, 2004 (KARNATAKA ACT 14 OF 2004)

**XXX XXX XXX**

**3. Prohibition of charging exorbitant interest.-** No person shall charge exorbitant interest on any loan advanced by him.

**XXX XXX XXX**

**4. Penalty.-** Notwithstanding anything contained in the Karnataka Money-Lenders Act, 1961, whoever contravenes the provision of section 3 or molests or abets the molestation of any debtor for recovery of any loan shall be punishable with imprisonment for a term which may extend to three years and also with fine which may extend to thirty thousand rupees.

**XXX XXX XXX**

Govt. Press, Vikasa Soudha, Bengalur, 10th Mar, 2025, P7, W.D. , Copies 300